# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

| | | |
|---|---|---|
| ಸಂಪುಟ-155<br>**Volume-155** | ಬೆಂಗಳೂರು, ಗುರುವಾರ, 16,**JANUARY**,2020(ಪುಷ್ಯ ೨೬, ಶಕವರ್ಷ೧೯೪೧)<br>**Bengaluru,THURSDAY, 16,JANUARY,2020( Pushya 26, ShakaVarsha 1941)** | ಸಂಚಿಕೆ-03<br>**Issue -03** |


## ಭಾಗ-೧

## ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012ರಡಿ ಅಧಿಸೂಚಿಸಲ್ಪಟ್ಟ ದಿನಗೂಲಿ ನೌಕರರಿಗೆ ನೀಡಲಾಗುತ್ತಿರುವ ತುಟ್ಟಿ ಭತ್ಯೆ ಹಾಗೂ ಮನೆ ಬಾಡಿಗೆ ಭತ್ಯೆ ದರಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:**

1. ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 77 ಶಾಸನ 2012, ದಿನಾಂಕ: 15.02.2013.
2. ಅಧಿಸೂಚನೆ ಸಂಖ್ಯೆ: ಸಿಆಸುಇ 44 ಸೇಸ್ಥಅ 2013, ದಿನಾಂಕ: 22.02.2014.
3. ಆದೇಶ ಸಂಖ್ಯೆ: ಸಿಆಸುಇ 24 ಸೇಸ್ಥಅ 2014, ದಿನಾಂಕ: 19.09.2014.

**ಪ್ರಸ್ತಾವನೆ:**

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿಗೆ ಮತ್ತು ಸೇವಾವಧಿಯ ಕನಿಷ್ಠ ಭದ್ರತೆ, ಉತ್ತಮ ವೇತನ ಹಾಗೂ ಕೆಲವು ಸಾಮಾಜಿಕ ಭದ್ರತೆಯನ್ನು ಕಲ್ಪಿಸಲು ಮೇಲೆ (1)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012ನ್ನು ರಚಿಸಲಾಗಿದೆ. ಸದರಿ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಮೇಲೆ (2)ರಲ್ಲಿ ಓದಲಾದ ಅಧಿಸೂಚನೆಯನ್ವಯ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳು 2013ನ್ನು ರಚಿಸಲಾಗಿದೆ.

ಮೇಲೆ (3)ರಲ್ಲಿ ಓದಲಾದ ದಿನಾಂಕ: 19.09.2014ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012ರಡಿ ಅಧಿಸೂಚಿಸಲ್ಪಟ್ಟ ದಿನಗೂಲಿ ನೌಕರರಿಗೆ ಅಧಿಸೂಚಿಸಿದ ದಿನಾಂಕದಿಂದ ವೇತನ, ರಜೆ ಮತ್ತು ಇತರೆ ಸೌಲಭ್ಯಗಳನ್ನು ಮಂಜೂರು ಮಾಡಲಾಗಿದೆ. ಸದರಿ ಆದೇಶದಲ್ಲಿ ಅಧಿಸೂಚಿತ ದಿನಗೂಲಿ ನೌಕರರಿಗೆ ಅವರನ್ನು ಸೇವೆಯಲ್ಲಿ ಮುಂದುವರೆಸಿದ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನಕ್ಕೆ ರಾಜ್ಯ ಸರ್ಕಾರಿ ನೌಕರರಿಗೆ ಕಾಲಕಾಲಕ್ಕೆ ನೀಡಲಾಗುವ ತುಟ್ಟಿಭತ್ಯೆಯ ಶೇಕಡಾ 75ರಷ್ಟನ್ನು ತುಟ್ಟಿಭತ್ಯೆಯಾಗಿ ಹಾಗೂ ರಾಜ್ಯ ಸರ್ಕಾರಿ ನೌಕರರಿಗೆ ಕಾಲಕಾಲಕ್ಕೆ ನೀಡಲಾಗುವ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಮನೆ ಬಾಡಿಗೆ ಭತ್ಯೆಯ ಶೇಕಡ 75ರಷ್ಟನ್ನು ಅವರುಗಳು ಕರ್ತವ್ಯ ನಿರ್ವಹಿಸುವ ಸ್ಥಳಕ್ಕೆ ಅನ್ವಯವಾಗುವಂತೆ ಮನೆ ಬಾಡಿಗೆ ಭತ್ಯೆಯಾಗಿ ಮಂಜೂರು ಮಾಡತಕ್ಕದ್ದೆಂದು ತಿಳಿಸಲಾಗಿದೆ.

ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012ರಡಿ ಅಧಿಸೂಚಿಸಲ್ಪಟ್ಟ ದಿನಗೂಲಿ ನೌಕರರಿಗೆ ಪ್ರಸ್ತುತ ನೀಡಲಾಗುತ್ತಿರುವ ತುಟ್ಟಿಭತ್ಯೆ ಮತ್ತು ಮನೆ ಬಾಡಿಗೆ ಭತ್ಯೆಯ ದರಗಳನ್ನು ಪರಿಷ್ಕರಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಸೇಸ್ಥಅ 2019,**

**ಬೆಂಗಳೂರು ದಿನಾಂಕ: 10.01.2020.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012ರಡಿ ಅಧಿಸೂಚಿಸಲ್ಪಟ್ಟ ಅರ್ಹ ದಿನಗೂಲಿ ನೌಕರರಿಗೆ ದಿನಾಂಕ: 19.09.2014ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾಗಿರುವ ಮಾನದಂಡಗಳಿಗೆ ಒಳಪಟ್ಟು, ಪ್ರಸ್ತುತ ನೀಡಲಾಗುತ್ತಿರುವ ಶೇಕಡ 75 ರಷ್ಟು ತುಟ್ಟಿಭತ್ಯೆಯನ್ನು ಪರಿಷ್ಕರಿಸಿ ಶೇಕಡ 90ಕ್ಕೆ ನಿಗದಿಪಡಿಸಲಾಗಿದೆ ಹಾಗೂ ಮನೆ ಬಾಡಿಗೆ ಭತ್ಯೆಯನ್ನು ಪರಿಷ್ಕರಿಸಿ ಶೇಕಡ 75 ರಿಂದ ಶೇಕಡ 90ಕ್ಕೆ ನಿಗದಿಪಡಿಸಿ ಆದೇಶಿಸಿದೆ.

ಈ ಆದೇಶದಲ್ಲಿನ ಪರಿಷ್ಕರಿಸಲಾದ ದರಗಳು ದಿನಾಂಕ: 01.12.2019ರಿಂದ ಜಾರಿಗೆ ಬರುತ್ತವೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 761 ಸೇ-1/2019 ದಿನಾಂಕ: 08.01.2020ರಲ್ಲಿ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಚಂದ್ರಹಾಸ ಗಂ. ತಾಳೂಕರ)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-೫೯.

SUNIL GARDE Digitally signed by SUNIL GARDE
Date: 2020.01.16 19:44:02 +05'30'